ಎಂ ವಿ ಸಿ ನಂಃ317/2023
ಪಿ ಡಬ್ಲ್ಯುಃ 1

<u>ದಿನಾಂಕಃ **21-11-2025** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣವಚನ ಮಾಡಿಸಲಾಯಿತು.</u>

<u>ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಪಾಟೀ ಸವಾಲು ಮಾಡಲು ಅನುಮತಿಯನ್ನು ನೀಡಲಾಯಿತು.</u>

<u>ಪಾಟೀ ಸವಾಲುಃ **2** ನೇ ಎದುರುದಾರರ ಪರ ಶ್ರೀ ಸಿ ಓ ವೈ ವಕೀಲರ ಪರವಾಗಿ ಶ್ರೀ ಎಂ ಎಸ್ ಎನ್ ವಕೀಲರಿಂದಃ</u>

ಅಪಘಾತ ಆಗುವ ಕಾಲಕ್ಕೆ ನನಗೆ ಅಂದಾಜು 65 ವರ್ಷ ವಯಸ್ಸು ಆಗಿತ್ತು. ನನಗೆ ಆ ಕಾಲಕ್ಕೆ 65 ವರ್ಷ ವಯಸ್ಸು ಆಗಿತ್ತು ಎನ್ನುವ ಬಗ್ಗೆ ನ್ಯಾಯಾಲಯಕ್ಕೆ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ಅಪಘಾತ ಪೂರ್ವದಲ್ಲಿ ನಾನು ಕೃಷಿ ಕೆಲಸ ಹಾಗೂ ಅಡಿಗೆ ಕೆಲಸವನ್ನು ಮಾಡುತ್ತಿದ್ದೆ. ನಾನು ಅಡಿಗೆ ಕೆಲಸವನ್ನು ಗುತ್ತಿಗೆಯ ಮೇಲೆ ನಾನೆ ಮಾಡುತ್ತಿದ್ದೆನು. ನಾನು ಈಗಲೂ ಸಹ ಅಡಿಗೆ ಕೆಲಸವನ್ನು ಮಾಡುತ್ತಾ ಇರುತ್ತೇನೆ ಎಂದರೆ ಸರಿಯಲ್ಲ. ನಾನು ಕೃಷಿಕ ಎಂದು ಕೆಲಸ ಮಾಡುತ್ತಿದ್ದೆ ಎಂದು ತೋರಿಸಲು ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಸಾಕ್ಷಿ ಮುಂದುವರೆದು ಸದರಿ ಜಮೀನನ್ನು ನನ್ನ ಅಣ್ಣನ ಮಗನಿಗೆ ನೋಡಿಕೊಳ್ಳಮ ಸಂಬಂಧ ಕೊಟ್ಟಿರುತ್ತೇನೆ ಎಂದು ಉತ್ತರಿಸುತ್ತಾರೆ. ನಮ್ಮ ತರೀ ಜಮೀನನ್ನು ನಾನು ಅಡಿಕೆ ತೋಟ ಮಾಡಿರುತ್ತೇನೆ. ಈಗ ನಮ್ಮ ಹೆಸರಿನಲ್ಲಿ ಜಮೀನು ಇರುವುದಿಲ್ಲ. ನನ್ನ ಹೆಸರಿನಲ್ಲಿ ಯಾವುದೇ ಜಮೀನು ಇರದೇ ಇದ್ದರೂ ಇತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

2. ನಾನು ಅಪಘಾತ ಆದ ದಿವಸ ಬೇಗಾರು ಇಂದ ಹಾಲಮತ್ತೂರು ನಮ್ಮ ಮನೆಗೆ ಬರುತ್ತಿದ್ದೆನು. ಆ ದಿನ ನಾನು ಬೈಕ್ ಅನ್ನು ಚಾಲನೆ ಮಾಡಿಕೊಂಡು ಬರುತ್ತಿದ್ದೆನು. ನಾನು ಆ ದಿನ ರಸ್ತೆಯ ಎಡ ಭಾಗದಲ್ಲಿ ನನ್ನ ಬೈಕನ್ನು ಚಲಾಯಿಸಿಕೊಂಡು ಬರುತ್ತಿದ್ದೆನು. ಅಪಘಾತ ಆದ ಸ್ಥಳವು ನೇರವಾದ ರಸ್ತೆ ಕೂಡಿದ ಜಾಗ ಇತ್ತು ಎಂದರೆ ಸರಿ. ಸುಮಾರು 200.ಮೀ ದೂರುದಿಂದ ಬರುವ ವಾಹನಗಳು ನಮಗೆ ಕಾಣಿಸುತ್ತವೆ ಎಂದರೆ ಸರಿ. ಆ ದಿನ 1 ನೇ ಎದುರುದಾರ ನಿಧಾನವಾಗಿ ತನ್ನ ಕಾರನ್ನು ಚಲಾಯಿಸಿಕೊಂಡು ಬರುತ್ತಿದ್ದನು ಎಂದರೆ ಸರಿಯಲ್ಲ. 1 ನೇ ಎದುರದಾರನ ತಪ್ಪಿನಿಂದ ಅಪಘಾತ ಆಗಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಅಪಘಾತ ಆದ ನಂತರ ಶೃಂಗೇರಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಕೊಂಡಿರುತ್ತೇನೆ. ನಂತರ ನಾನು ಎನ್ ಆರ್ ಪುರ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆ. ನಾನು ಶೃಂಗೇರಿ ಸರ್ಕಾರಿ ಆಸ್ಪತ್ರೆಯಲ್ಲಿ ಒಂದು ದಿನ ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ ಹಾಗೂ ಎನ್ ಆರ್ ಪುರ ಸರ್ಕಾರಿ ಆಸ್ಪತ್ರೆಯಲ್ಲಿ 10 ದಿನಗಳ ಕಾಲ

ಒಳರೋಗಿಯಾಗಿ ಚಿಕಿತ್ಸೆ ಪಡೆದಿರುತ್ತೇನೆ. ನಾನು ಒಳರೋಗಿಯಾಗಿ ಚಿಕಿತ್ಸೆ ಪಡೆದ ಸಂಬಂಧ ದಾಖಲೆಯನ್ನು ನ್ಯಾಯಲಯಕ್ಕೆ ಹಾಜರುಪಡಿಸಿರುತ್ತೇನೆ. ನನಗೆ ಶೃಂಗೇರಿ ಮತ್ತು ಎನ್ ಆರ್ ಪುರ ಆಸ್ಪತ್ರೆಯಲ್ಲಿ ಉಚಿತವಾಗಿ ಚಿಕಿತ್ಸೆ ನೀಡಿರುತ್ತಾರೆ ಎಂದರೆ ಸರಿ ಸಾಕ್ಷಿ ಮುಂದುವರೆದು ಇತರೆ ಖರ್ಚುಗಳಿಗೆ ಹಣ ಕೊಟ್ಟಿರುತ್ತೇನೆ ಎಂದು ಉತ್ತರಿಸುತ್ತಾರೆ. ಎನ್ ಆರ್ ಪುರ ಸರ್ಕಾರಿ ಆಸ್ಪತ್ರೆಯಲ್ಲಿ ಎಲ್ಲಾ ವೈಧ್ಯಕೀಯ ಸೌಲಭ್ಯಗಳು ಇರುತ್ತದೆ ಎಂದರೆ ಸರಿ. ನನ್ನ ವೈಧ್ಯಕೀಯ ವೆಚ್ಚಕ್ಕೆ ರೂ.3 ಲಕ್ಷ ಖರ್ಚು ಆಗಿರುತ್ತದೆ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಚಿಕಿತ್ಸೆಗೆ ರೂ.3 ಲಕ್ಷ ಹಣ ಖರ್ಚು ಆಗಿರುತ್ತದೆ ಎಂಬುದರ ಬಗ್ಗೆ ನಾನು ನ್ಯಾಯಲಯಕ್ಕೆ ಯಾವುದೇ ದಾಖಲೆಯನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ.

3. ನನ್ನ ಮುಂದುವರೆದ ಚಿಕಿತ್ಸೆಗೆ ರೂ. 2 ಲಕ್ಷದ ಹಣದ ಅವಶ್ಯಕತೆ ಇರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡ ಕಾರಣ ನನ್ನ ಅರ್ಜಿಯಲ್ಲಿ ಹೇಳಿದಷ್ಟು ಹಣ ವೈಧ್ಯಕೀಯ ವೆಚ್ಚಕ್ಕೆ ಖರ್ಚು ಆಗಿರುವುದಿಲ್ಲ ಎಂದರೆ ಸರಿಯಲ್ಲ. ನನಗೆ ಮಾಸಿಕ ರೂ.25,000/-ಆದಾಯ ಇತ್ತು ಎಂದು ತೋರಿಸಲು ನನ್ನ ಬಳಿ ಯಾವುದೇ ದಾಖಲೆ ಇರುವುದಿಲ್ಲ ಎಂದರೆ ಸರಿಯಲ್ಲ. ನನಗೆ ಅಪಘಾತದಿಂದ ತೀವ್ರ ಸ್ವರೂಪದ ಗಾಯಗಳು ಉಂಟಾಗಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ತಪ್ಪಿನಿಂದ ಅಪಘಾತ ಆಗಿದ್ದು 2 ನೇ ಎದುರುದಾರರು ಪರಿಹಾರ ಕೊಡಲು ಬಾಧ್ಯಸ್ಥರು ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಮೊದಲಿನ ರೀತಿ ಈಗಲೂ ಆರೋಗ್ಯವಾಗಿ ಕೆಲಸ ಮಾಡುತ್ತ ಇರುತ್ತೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲಃಃ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ.)

ಓ ಹೇ ಕೇ ಸ ಇ ಎ ಒ

Sd/-
ಹಿರಿಯ ಸಿವಿಲ್ ನ್ಯಾಯಾಧೀಶರುಃ ನ.ರಾ.ಪುರ,
ಸಂಚಾರಿ ನ್ಯಾಯಾಲಯ, ಕೊಪ್ಪ.

ಸಾಕ್ಷಿದಾರರ ಸಹಿಃ